## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಟಿ.ಎಸ್ ಶಿವರಾಮು, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕನಕಪುರ (ಮೂಲತಃ ಆರ್ಥಿಕ ಇಲಾಖೆ) ಇವರ ವಿರುದ್ಧದ ಇಲಾಖಾ ವಿಚಾರಣೆಗೆ ಸಂಬಂಧಿಸಿದಂತೆ ದೋಷಾರೋಪಣ ಪಟ್ಟಿ ಮತ್ತು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಿಸಿದ ಆದೇಶವನ್ನು ಹಿಂಪಡೆಯುವ ಬಗ್ಗೆ.

**ಓದಲಾಗಿದೆ:**
1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ರಾಮನಗರ ಇವರ ಪತ್ರ ಸಂಖ್ಯೆ: ರಾಜಿಪಂ/ಸಿಬ್ಬಂದಿ/ಸಿ1/ಸಿಆರ್-11/2017-18/488, ದಿನಾಂಕ: 22.04.2021.
2) ಸರ್ಕಾರದ ಕಾರಣ ಕೇಳುವ ನೋಟಿಸ್ ಸಂಖ್ಯೆ: ಗ್ರಾಅಪ 67 ವಿಸೇಬಿ 2021, ದಿನಾಂಕ: 13.07.2021.
3) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 67 ವಿಸೇಬಿ 2021, ದಿನಾಂಕ: 13.10.2021.
4) ಅಪರ ಪೊಲೀಸ್ ಮಹಾನಿರ್ದೇಶಕರವರ ಕಛೇರಿ, ಭ್ರಷ್ಟಾಚಾರ ನಿಗ್ರಹ ದಳ, ಖನಿಜ ಭವನ, ಬೆಂಗಳೂರು ಇವರ ಪತ್ರ ಸಂಖ್ಯೆ: ಎಸಿಬಿ/ಕೇಂಕ/ರಾಮನಗರ/ಜಿ.ಅರ್ಜಿ/06/2021, ದಿನಾಂಕ: 26.05.2021.
5) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 77 ವಿಸೇಬಿ 2021, ದಿನಾಂಕ: 16.04.2022.

*****

**ಪ್ರಸ್ತಾವನೆ:-**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ರಾಮನಗರ ಇವರು ಮೇಲೆ ಕ್ರಸಂ (1)ರಲ್ಲಿ ಓದಲಾದ ಪ್ರಸ್ತಾವನೆಯನ್ನು ಸಲ್ಲಿಸಿ, ಶ್ರೀ ಟಿ.ಎಸ್ ಶಿವರಾಮು ಇವರು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕನಕಪುರ, ರಾಮನಗರ ಜಿಲ್ಲೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಕನಕಪುರ ತಾಲ್ಲೂಕಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಂದ ಕೇಂದ್ರ ಕಛೇರಿಗೆ ಶೇ. 3 ರಷ್ಟು ಕಮಿಷನ್ ನೀಡಬೇಕೆಂದು ಹಣಕ್ಕಾಗಿ ಬೇಡಿಕೆ ಇಟ್ಟಿರುವ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಇಲಾಖೆಯ ವಿವಿಧ ಯೋಜನೆಗಳಡಿ ಬಿಡುಗಡೆಯಾಗಿರುವ ಅನುದಾನದಲ್ಲಿ ಹಣ ನೀಡುವಂತೆ ಒತ್ತಡ ಹಾಕುವ ಮೂಲಕ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 2021ರ ನಿಯಮ 3 (1)ರ ಉಪನಿಯಮ (i), (ii), (iii) ಅನ್ನು ಉಲ್ಲಂಘಿಸಿರುವುದಾಗಿ ತಿಳಿಸಿ, ಸದರಿಯವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳುವಂತೆ ಕೋರಿ ಕರಡು ದೋಷಾರೋಪಣ ಪಟ್ಟಿ ಮತ್ತು ಪೂರಕ ದಾಖಲೆಗಳೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಆಪಾದಿತರ ವಿರುದ್ಧದ ಆರೋಪಗಳು ಗಂಭೀರ ಸ್ವರೂಪದ್ದಾಗಿದ್ದು, ಸದರಿ ಅಧಿಕಾರಿಯು ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದರಿಂದ ಅವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ ಕರ್ನಾಟಕ ನಾಗರೀಕ ಸೇವಾ (ವ.ನಿ & ಮೇ), ನಿಯಮಗಳು, 1957ರ ನಿಯಮ 11ರಡಿಯಲ್ಲಿ ದೋಷಾರೋಪಣ ಪಟ್ಟಿಯೊಂದಿಗೆ ಮೇಲೆ ಕ್ರಸಂ (2)ರಲ್ಲಿನ ಕಾರಣ ಕೇಳುವ ನೋಟಿಸ್‌ನ್ನು ಜಾರಿ ಮಾಡಿ ಸಮಜಾಯಿಷಿ ಏನಾದರೂ ಇದ್ದಲ್ಲಿ, ಲಿಖಿತ ಮೂಲಕ ಸಲ್ಲಿಸುವಂತೆ ಆಪಾದಿತ ಅಧಿಕಾರಿಗೆ ಸೂಚಿಸಲಾಗಿತ್ತು.

..2

ಅದರನ್ವಯ ಆಪಾದಿತರು ದಿನಾಂಕ: 12.08.2021ರಂದು ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸಿ, ತಮ್ಮ ವಿರುದ್ಧದ ಆರೋಪಗಳನ್ನು ನಿರಾಕರಿಸಿ, ತಮ್ಮನ್ನು ದೋಷಾರೋಪ ಮುಕ್ತಗೊಳಿಸುವಂತೆ ಕೋರಿದ್ದರು.

ಸರ್ಕಾರವು ಆಪಾದಿತರ ವಿರುದ್ಧದ ದೋಷಾರೋಪಗಳು ಮತ್ತು ಅವರು ಕಾರಣ ಕೇಳುವ ನೋಟಿಸ್‌ಗೆ ಸಲ್ಲಿಸಿದ್ದ ಲಿಖಿತ ಹೇಳಿಕೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಪ್ರಕರಣದಲ್ಲಿನ ಆರೋಪಗಳು ಗಂಭೀರ ಸ್ವರೂಪದವುಗಳಾಗಿರುವುದರಿಂದ, ಆಪಾದಿತರ ವಿರುದ್ಧ ಮಾಡಲಾದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ ಮೇಲೆ ಕ್ರಸಂ (3)ರಲ್ಲಿ ಓದಲಾದ ಆದೇಶದಲ್ಲಿ, ಪ್ರಕರಣದ ವಿಚಾರಣೆಯನ್ನು ನಡೆಸಲು ಶ್ರೀ ಹೆಚ್.ಎಸ್ ರಾಮಕೃಷ್ಣ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಇವರನ್ನು ಪ್ರಕರಣದ ವಿಚಾರಣಾಧಿಕಾರಿಯನ್ನಾಗಿ ಮತ್ತು ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ರಾಮನಗರ ಇವರನ್ನು ಪ್ರಕರಣದ ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿರುತ್ತದೆ.

ಮೇಲೆ ಕ್ರಸಂ (4)ರಲ್ಲಿ ಓದಲಾದ ಪತ್ರದಲ್ಲಿ, ಪೋಲೀಸ್ ಅಧೀಕ್ಷಕರು (ಕೇಂದ್ರ ಸ್ಥಾನ), ಅಪರ ಪೊಲೀಸ್ ಮಹಾನಿರ್ದೇಶಕರವರ ಕಛೇರಿ, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಇವರು ಶ್ರೀ ಟಿ.ಎಸ್.ಶಿವರಾಮು, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕನಕಪುರ ಇವರ ವಿರುದ್ಧ ತನಿಖೆ/ ವಿಚಾರಣೆ ಕೈಗೊಳ್ಳಲು ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ-1988ರ ಕಲಂ-17(ಎ)(1)ರನ್ವಯ ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಕೋರಿ ಪೋಲೀಸ್ ಅಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಕೇಂದ್ರ ವಲಯ ಇವರ ತನಿಖಾ ವರದಿಯನ್ನು ಸರ್ಕಾರಕ್ಕೆ ಕಳುಹಿಸಿದ್ದರು.

ಸದರಿ ತನಿಖಾ ವರದಿ ಮತ್ತು ದಾಖಲೆಗಳನ್ನು ಸರ್ಕಾರದಲ್ಲಿ ಕೂಲಂಕಷವಾಗಿ ಪರಿಶೀಲಿಸಲಾಗಿ, ಶ್ರೀ ಟಿ.ಎಸ್.ಶಿವರಾಮು, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕನಕಪುರ ಇವರ ವಿರುದ್ಧ ಮೇಲೆ ಕ್ರಸಂ (1)ರಲ್ಲಿ ಜಾರಿಗೊಳಿಸಿರುವ ದೋಷಾರೋಪಣ ಪಟ್ಟಿಯಲ್ಲಿನ ಅದೇ ಆರೋಪಗಳ ಕುರಿತು ಪೋಲೀಸ್ ಅಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ ಇವರು ತನಿಖೆಯನ್ನು ಕೈಗೊಂಡಿರುವುದು ಕಂಡು ಬಂದಿರುತ್ತದೆ.

ಸದರಿ ಭ್ರಷ್ಟಾಚಾರ ನಿಗ್ರಹ ದಳದ ತನಿಖಾ ವರದಿಯಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗಿರುವ ನರೇಗಾ ಯೋಜನೆಯ ವಿವಿಧ ಕಾಮಗಾರಿಗಳಿಗೆ ಸಾಮಾಗ್ರಿಗಳನ್ನು ಸರಬರಾಜು ಮಾಡಿದ ಎಂ.ಸಿ ಬಿಲ್ಲುಗಳ ಮೇಲೆ ಮತ್ತು ಯೋಜನೆಯ ಕಾಮಗಾರಿಗಳ ಕೂಲಿಯಾಳುಗಳ ವೇತನ ಬಿಲ್ಲುಗಳ ಮೇಲೆ ಶೇಕಡವಾರು ಲಂಚವನ್ನು ವಸೂಲಿ ಮಾಡಿ ನೀಡುವಂತೆ ಚಾಕನಹಳ್ಳಿ ಗ್ರಾಮ ಪಂಚಾಯಿತಿ ಮತ್ತು ನಾರಾಯಣಪುರ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಶ್ರೀ ಟಿ.ಎಸ್ ಶಿವರಾಮು, ಕಾರ್ಯನಿರ್ವಾಹಕ ಅಧಿಕಾರಿಯವರು ಕೇಳಿರುವ ಆರೋಪವು ಫೋನ್ ಕಾಲ್ ಸಂಭಾಷಣೆಯ ರೆಕಾರ್ಡಿಂಗ್‌ಗಳಿಂದ (Audio clips) ಮೇಲ್ನೋಟಕ್ಕೆ ಸಾಬೀತಾಗಿರುತ್ತದೆ ಹಾಗೂ ದಿನಪತ್ರಿಕೆಗಳಲ್ಲಿ ಪ್ರಕಟವಾಗಿರುವ ಕನಕಪುರ ತಾಲ್ಲೂಕು ವ್ಯಾಪ್ತಿಯಲ್ಲಿ ನರೇಗ ಯೋಜನೆಯಡಿ ನಡೆಸಲಾಗಿರುವ ಕಾಮಗಾರಿಗಳಲ್ಲಿ ಕಳಪೆ ಕಾಮಗಾರಿ ನಡೆಸಿರುವ, ಇಲಾಖೆಯ ವಿವಿಧ ಯೋಜನೆಗಳಡಿ ಬಿಡುಗಡೆಯಾಗಿರುವ ಅನುದಾನದಲ್ಲಿ ಹಣ ನೀಡುವಂತೆ ಒತ್ತಡ ಹಾಕಿರುವ, ಕಡಿಮೆ ವೆಚ್ಚದ ಕಾಮಗಾರಿಗಳಿಗೆ ಹೆಚ್ಚಿನ ಮೊತ್ತದ

..3

ಬಿಲ್ಲುಗಳನ್ನು ಪಡೆದುಕೊಂಡು ಸರ್ಕಾರದ ಬೊಕ್ಕಸಕ್ಕೆ ನಷ್ಟವನ್ನುಂಟು ಮಾಡಿರುವ ಆರೋಪಗಳು ಭ್ರಷ್ಟಾಚಾರ ನಿಗ್ರಹ ದಳದಿಂದ ನಡೆಸಲಾಗಿರುವ ತನಿಖೆಯಲ್ಲಿ ಮೇಲ್ನೋಟಕ್ಕೆ ಸಾಬೀತಾಗಿರುವುದು ಕಂಡು ಬಂದಿದ್ದು, ಸದರಿ ಪ್ರಕರಣದಲ್ಲಿನ ಆರೋಪಗಳು ಗಂಭೀರ ಸ್ವರೂಪದವುಗಳಾಗಿದ್ದು, ಈ ಆರೋಪಗಳಲ್ಲಿ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳು ಮತ್ತು ಅಧಿಕಾರೇತರ ಸದಸ್ಯರುಗಳು ಭಾಗಿಯಾಗಿರುವುದು ಮತ್ತು ಸರ್ಕಾರದ ಅನುದಾನ ಮತ್ತು ಅಧಿಕಾರ ವ್ಯಾಪಕವಾಗಿ ದುರುಪಯೋಗವಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಪ್ರಕರಣದ ಕುರಿತು ಸವಿಸ್ತಾರವಾದ ತನಿಖೆ ನಡೆಸುವುದು ಅಗತ್ಯವೆಂದು ತೀರ್ಮಾನಿಸಿ ಮೇಲೆ ಕ್ರ.ಸಂ (5)ರಲ್ಲಿ ಓದಲಾದ ಆದೇಶದಲ್ಲಿ, ಶ್ರೀ ಟಿ.ಎಸ್.ಶಿವರಾಮು, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕನಕಪುರ ಇವರ ವಿರುದ್ಧದ ಆರೋಪಗಳ ಕುರಿತು ಸವಿಸ್ತಾರವಾದ ತನಿಖೆಯನ್ನು ನಡೆಸಲು ಪ್ರಕರಣವನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 7 (2)(ಎ) ರನ್ವಯ ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ಏಕರೂಪದ ಆರೋಪಗಳಿಗೆ ಸಂಬಂಧಿಸಿದಂತೆ ಏಕ ಕಾಲದಲ್ಲಿ 2 ಪ್ರತ್ಯೇಕ ಶಿಸ್ತಿನ ನಡವಳಿಗಳನ್ನು ಜರುಗಿಸುವುದು ನಿಯಮಗಳಿಗೆ ವಿರುದ್ಧವಾಗುವುದರಿಂದ, ಶ್ರೀ ಟಿ.ಎಸ್.ಶಿವರಾಮು, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕನಕಪುರ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಮೇಲೆ ಕ್ರ.ಸಂ (2)ರ ದೋಷಾರೋಪಣ ಪಟ್ಟಿಯನ್ನು ಜಾರಿಗೊಳಿಸುವ ಮೂಲಕ ಪ್ರಾರಂಭಿಸಲಾಗಿದ್ದ ಇಲಾಖಾ ವಿಚಾರಣೆ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿ, ಮೇಲೆ ಕ್ರ.ಸಂ (2)ರಲ್ಲಿ ಓದಲಾದ ದೋಷಾರೋಪಣ ಪಟ್ಟಿ ಮತ್ತು ಮಂಡನಾಧಿಕಾರಿ ಮತ್ತು ವಿಚಾರಣಾಧಿಕಾರಿಯನ್ನು ನೇಮಕ ಮಾಡಿದ್ದ ಕ್ರ.ಸಂ (3)ರಲ್ಲಿ ಓದಲಾದ ಆದೇಶವನ್ನು ಹಿಂಪಡೆಯಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 67 ವಿಸೇಬಿ 2021, ಬೆಂಗಳೂರು, ದಿನಾಂಕ: 12.05.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, **ಶ್ರೀ ಟಿ.ಎಸ್.ಶಿವರಾಮು, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕನಕಪುರ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ದಿನಾಂಕ: 13.07.2021ರ ದೋಷಾರೋಪಣ ಪಟ್ಟಿಯನ್ನು ಜಾರಿಗೊಳಿಸುವ ಮೂಲಕ ಪ್ರಾರಂಭಿಸಲಾಗಿದ್ದ ಇಲಾಖಾ ವಿಚಾರಣೆ ಪ್ರಕ್ರಿಯೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸ್ಥಗಿತಗೊಳಿಸಿ ಆದೇಶಿಸಿದೆ ಮತ್ತು ಮೇಲೆ ಕ್ರ.ಸಂ (2)ರಲ್ಲಿ ಓದಲಾದ ದಿನಾಂಕ: 13.07.2021ರ ದೋಷಾರೋಪಣ ಪಟ್ಟಿ ಹಾಗೂ ಕ್ರ.ಸಂ (3)ರ ಮಂಡನಾಧಿಕಾರಿ ಮತ್ತು ವಿಚಾರಣಾಧಿಕಾರಿಯನ್ನು ನೇಮಕ ಮಾಡಿದ್ದ ದಿನಾಂಕ: 13.10.2021ರ ಆದೇಶವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆದು** ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಾಲಪ್ಪ) 12/05/2022
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

12/5/2022

**ಇವರಿಗೆ,**

1) ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು.

2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ.
4) ಶ್ರೀ ಹೆಚ್.ಎಸ್ ರಾಮಕೃಷ್ಣ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ನಂ.245, 8ನೇ ಮೈನ್, ಜುಡೀಷಿಯಲ್ ಲೇಔಟ್, ಶಿವನಗರ, ತಲಘಟ್ಟಪುರ, ಬೆಂಗಳೂರು-560062 (ಆರ್.ಪಿ.ಎ.ಡಿ ಮೂಲಕ).
5) ಉಪ ಕಾರ್ಯದರ್ಶಿ ಹಾಗೂ ಮಂಡನಾಧಿಕಾರಿ, ಜಿಲ್ಲಾ ಪಂಚಾಯಿತಿ, ರಾಮನಗರ.
6) ಶ್ರೀ ಶಿವರಾಮು.ಟಿ.ಎಸ್, ನಂ. 44, ಅಕ್ಷಯ ಪ್ರಕಾಶ್ ನಿಲಯ, 4ನೇ ಮಹಡಿ, ಬಿಕಾಸಿಪುರ, 2ನೇ ಮುಖ್ಯ ರಸ್ತೆ, ಇಸ್ರೋ ಲೇಔಟ್, ಬ್ಯಾಂಕ್ ಆಫ್ ಬರೋಡ ಹತ್ತಿರ, ಬೆಂಗಳೂರು.
7) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8) ಮಾಹಿತಿ ಕೇಂದ್ರ/ ಶಾಖಾ ರಕ್ಷಕ ಕಡತ/ ಹೆಚ್ಚುವರಿ ಪ್ರತಿ.

<u>ಪ್ರತಿ ಮಾಹಿತಿಗಾಗಿ:</u>

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಉಪ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

*****